ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರ.ವಿ./ 4 /2018-19 ದಿನಾಂಕ: 31-08-2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಉಂಟಾಗಿರುವ ತುರ್ತು ಪರಿಸ್ಥಿತಿ ಹಿನ್ನಲೆಯಲ್ಲಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಡಿಕೇರಿ ಇವರ ವಾಹನಕ್ಕೆ ಚಾಲಕರನ್ನು ನಿಯೋಜಿಸುವ ಕುರಿತು.

-----------

ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ/ ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಪ್ರಸ್ತುತ ಪರಿಹಾರ ವಿತರಣೆ / ಮೂಲ ಸೌಕರ್ಯಗಳ ಪುನರ್ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುತ್ತದೆ. ಮುಂದುವರೆದು, ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಡಿಕೇರಿ ಇವರ ವಾಹನಕ್ಕೆ ಚಾಲಕರ ಅನಿವಾರ್ಯತೆ ಇರುತ್ತದೆ.

ಆದುದರಿಂದ ಈ ಕಚೇರಿಯಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ **ಶ್ರೀ ಯು.ಕೆ. ವಸಂತ, ವಾಹನ ಚಾಲಕರು, ಜಿಲ್ಲಾ ಸರ್ವೇಕ್ಷಣಾ ಘಟಕ, ಮಡಿಕೇರಿ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಡಿಕೇರಿ ಇವರ ವಾಹನ ಚಾಲಕರನ್ನಾಗಿ ಮರು ನಿಯೋಜಿಸಿ** ಆದೇಶಿಸಿದೆ.

**ಈ ತಾತ್ಕಾಲಿಕ ನಿಯೋಜನೆಯು ಜಿಲ್ಲೆಯಲ್ಲಿ ಆಗಿರುವ ಅತಿವೃಷ್ಠಿ ಹಿನ್ನಲೆಯಲ್ಲಿ ತುರ್ತಾಗಿ ಆಗಬೇಕಾದ ಪರಿಹಾರ ಕ್ರಮಗಳ ಬಗ್ಗೆ ಆಗಿರುವುದರಿಂದ ಯಾವುದೇ ಪತ್ರ ವ್ಯವಹಾರ ಅಥವಾ ಬದಲಾವಣೆಗೆ ಅವಕಾಶವಿರುವುದಿಲ್ಲ.**

(ಸಹಿ)
ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು: ಸಂಬಂಧಪಟ್ಟ ಎಲ್ಲಾ ಅಧಿಕಾರಿ/ ಸಿಬ್ಬಂದಿಗಳಿಗೆ ಸೂಕ್ತ ಕ್ರಮಕ್ಕಾಗಿ.